**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಎಸ್. ಎಲ್ ಭೋಜೇಗೌಡ ಇವರು ಮಂಡಿಸಿರುವ ನಿಯಮ-72 ಕ್ಕೆ ಉತ್ತರ**

**ವಿಷಯ:-**

**ಸಮಾಜದಲ್ಲಿ ಶಿಕ್ಷಕರಿಗೆ ಮಹತ್ತರವಾದ ಹಾಗೆ ಗೌರವಯುತವಾದ ಸ್ಥಾನವಿದ್ದು, ಬೋಧನಾ ಕಾರ್ಯಗಳನ್ನು ಹೊರತುಪಡಿಸಿ ಅನ್ಯಕಾರ್ಯಗಳಿಗೆ ನಿಯೋಜಿಸುವುದು ಸೂಕ್ತವಲ್ಲ. ಶಿಕ್ಷಣಕ್ಷೇತ್ರವನ್ನು ಹೊರತುಪಡಿಸಿ ಉಳಿದ ಯಾವುದೇ ಕ್ಷೇತ್ರದಲ್ಲಿ ಅವರನ್ನು ತೊಡಗಿಸುವುದು ಶಿಕ್ಷಕರ ವೃತ್ತಿಗೆ ಅಪಮಾನ. ಶಿಕ್ಷಕರನ್ನು ಶಿಕ್ಷಣ ಕ್ಷೇತ್ರಕ್ಕೆ ಸೀಮಿತಗೊಳಿಸುವುದರಿಂದ ಶಿಕ್ಷಣದ ಗುಣಮಟ್ಟ ಅಭಿವೃದ್ಧಿಯಾಗುವುದರಲ್ಲಿ ಯಾವುದೇ ಸಂಶಯವಿಲ್ಲ. ಪ್ರೌಢ ಶಾಲೆಗಳ ಶಿಕ್ಷಕರನ್ನು ಅನ್ಯಕಾರ್ಯಗಳಿಗೆ ನಿಯೋಜಿಸುತ್ತಿರುವುದರಿಂದ ಇತ್ತೀಚಿನ ದಿನಗಳಲ್ಲಿ ಶಿಕ್ಷಣದ ಗುಣಮಟ್ಟ ಸಂಪೂರ್ಣವಾಗಿ ನೆಲಕಚ್ಚಿದೆ. ಶಿಕ್ಷಣ ಇಲಾಖೆಯ ನೌಕರರನ್ನು ಹೊರತುಪಡಿಸಿ ಉಳಿದ ಇಲಾಖೆಯ ನೌಕರರನ್ನು ಅನ್ಯಕಾರ್ಯಗಳಿಗೆ ಬಳಸಿಕೊಂಡು ಶಿಕ್ಷಕರನ್ನು ಶಿಕ್ಷಣಕ್ಷೇತ್ರಕ್ಕೆ ಮಾತ್ರ ಸೀಮಿತಗೊಳಿಸುವ ಬಗ್ಗೆ ಸರ್ಕಾರದಿಂದ ಆದೇಶಿಸುವ ಕುರಿತ ವಿಷಯದ ಬಗ್ಗೆ ಪ್ರಸ್ತಾಪಿಸಿರುತ್ತಾರೆ.**

**ಉತ್ತರ:**

ಜಂಟಿ ಮುಖ್ಯ ಚುನಾವಣಾಧಿಕಾರಿಗಳು(ಸಿಆಸುಇ) ಇವರ ಪತ್ರ ಸಂಖ್ಯೆ:ಸಿಆಸುಇ 54 ಚುಮಪ 2021 ದಿ:03.08.2023 ರಲ್ಲಿ ಹೊರಡಿಸಲಾದ ಪತ್ರದನ್ವಯ ಶಿಕ್ಷಕರನ್ನು ಚುನಾವಣಾ ಕಾರ್ಯಕ್ಕೆ ನಿಯೋಜಿಸಲು ಭಾರತ ಚುನಾವಣಾ ಆಯೋಗದ ಮತದಾರರ ಪಟ್ಟಿಗಳ ಕೈಪಿಡಿ ಅಕ್ಟೋಬರ್ 2016 ರ ಅಧ್ಯಾಯ-5ರ ಪ್ಯಾರಾ 5.2 ಮತಗಟ್ಟೆ ಮಟ್ಟದ ಅಧಿಕಾರಿಗಳ ನಿಯೋಜನೆಗೆ 13 ವಿವಿಧ ಹುದ್ದೆಗಳ ವಿವರ ನೀಡಲಾಗಿರುತ್ತದೆ ಹಾಗೂ ತೀರಾ ಅನಿವಾರ್ಯ ಸಂದರ್ಭಗಳಲ್ಲಿ ಕೆಲವೊಂದು ಷರತ್ತಿನ ಮೇರೆಗೆ ಕಾರ್ಯಗಳನ್ನು ನಿರ್ವಹಿಸಲು ಸೂಚಿಸಲಾಗಿರುತ್ತದೆ.

ಮುಂದುವರೆದು ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸುತ್ತೋಲೆ ಸಂಖ್ಯೆ: KARC-2/1/48/2025 ದಿನಾಂಕ:01.07.2025 ರಲ್ಲಿ ಶಿಕ್ಷಕರು ಸಂಪೂರ್ಣವಾಗಿ ಶಾಲೆಯಲ್ಲಿ ಹಾಜರಿದ್ದು, ವಿದ್ಯಾರ್ಥಿಗಳು ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳಿಂದ ವಂಚಿತರಾಗುವುದನ್ನು ತಡೆಗಟ್ಟುವ ಬಗ್ಗೆ ಸ್ಪಷ್ಟವಾದ ಸೂಚನೆಗಳನ್ನು ನೀಡಲಾಗಿದೆ.

**ಸಂಖ್ಯೆ: ಇಪಿ 14 ಎಲ್‌ಬಿಪಿ 2026**

**(ಎಸ್ ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು**

**ಕರ್ನಾಟಕ ಸರ್ಕಾರ**

ಸಂಖ್ಯೆ: KARC-2/1/48/2025

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 01.07.2025

**ಸುತ್ತೋಲೆ**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು ಸರ್ಕಾರಿ ಶಾಲೆಗಳಲ್ಲಿ ಶಾಲೆಯ ಸಮಯದಲ್ಲಿ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಶಾಲೆಯಲ್ಲಿಯೇ ಹಾಜರಿದ್ದು, ಶಿಕ್ಷಣದ ಹಕ್ಕು ಕಾಯಿದೆಯ ಅಡಿಯಲ್ಲಿ ಪ್ರತಿದಿನ ಶಾಲೆಯ ಹಂತದಲ್ಲಿ ಭೋಧನೆ ಮತ್ತು ಕಲಿಕೆ ನಡೆಸಲು ಅನುವಾಗಬೇಕು. ಸರ್ಕಾರಿ ಶಾಲೆಗಳಲ್ಲಿ ಕಲಿಕೆ ಫಲಿತಾಂಶಗಳನ್ನು ಸುಧಾರಿಸಲು ಮತ್ತು ಉತ್ತಮ ಬೋಧನೆ ನೀಡಲು ಶಿಕ್ಷಕರೂ ಹಾಗೂ ಶಾಲಾ ಮುಖ್ಯೋಪಾಧ್ಯಾಯರೂ ಸಂಪೂರ್ಣವಾಗಿ ಶಾಲೆಯಲ್ಲಿ ಹಾಜರಿರುವುದು ಅತ್ಯಂತ ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಡಯಟ್ ಪ್ರಾಂಶುಪಾಲರು ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ರಾಜ್ಯ ಹಾಗೂ ಜಿಲ್ಲೆಯಲ್ಲಿ ಇರುವ ಎಲ್ಲಾ ಅಧಿಕಾರಿಗಳು/ಸಿಬ್ಬಂದಿಗಳು ಈ ಕೆಳಗಿನ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಲು ನಿರ್ದೇಶಿಸಲಾಗಿದೆ:

i) ಯಾವುದೇ ಶಿಕ್ಷಕರನ್ನು/ಶಾಲಾ ಮುಖ್ಯೋಪಾಧ್ಯಾಯರನ್ನು ಯಾವುದೇ ತರಬೇತಿ ಕಾರ್ಯಕ್ರಮಗಳಿಗೆ, ಕಾರ್ಯಾಗಾರಗಳಿಗೆ, ಸಭೆಗಳಿಗೆ, ಇತರೆ ಚಟುವಟಿಕೆಗಳಿಗೆ ಶಾಲಾ ದಿನಗಳಲ್ಲಿ, ಶಾಲಾ ಸಮಯದಲ್ಲಿ ನಿಯೋಜನೆ/ಓ.ಓ.ಡಿ, ಮೌಖಿಕ ಅಥವಾ ಲಿಖಿತ ಆದೇಶಗಳ ಮೂಲಕ ಕಳುಹಿಸಬಾರದು. ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಹ ಇಂತಹ ನಿರ್ದೇಶನಗಳನ್ನು ನೀಡಬಾರದು.

ii) ಶಾಲಾ ಸಮಯದಲ್ಲಿ ಶಾಲಾ ಶಿಕ್ಷಕರು ಮತ್ತು ಶಾಲಾ ಮುಖ್ಯೋಪಾಧ್ಯಾಯರ ಯಾವುದೇ ಸಭೆಗಳನ್ನು ಕರೆಯಬಾರದು ಅಥವಾ ವಿಡಿಯೋ ಕಾನ್ಫರೆನ್ಸ್ (video conference) ಮಾಡಬಾರದು. ಶಾಲೆಗಳನ್ನು ಭೇಟಿ ನೀಡುವ ಯಾವುದೇ ಅಧಿಕಾರಿಗಳು ಶಾಲೆಯ ತರಗತಿಗಳಿಗೆ ತೊಂದರೆಯಾಗದಂತೆ ನಡೆದುಕೊಳ್ಳತಕ್ಕದ್ದು.

iii) ಯಾವುದೇ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳನ್ನು ಅವರ ಶಾಲೆಯ ಹೊರಗಡೆ ವಿವಿಧ ಕಾರ್ಯಕ್ರಮಗಳ ಪ್ರೇಕ್ಷಕರಾಗಿ ಭಾಗವಹಿಸಲು ಅಥವಾ ಕರೆದುಕೊಂಡು ಹೋಗಲು ನಿರ್ದೇಶಿಸಬಾರದು.

----2

iv) ಶಾಲಾ ದಿನಗಳಲ್ಲಿ ಯಾವುದೇ ಬಾಹ್ಯ ಪರೀಕ್ಷೆಗಳನ್ನು (ಉದಾ: ಕರ್ನಾಟಕ ಲೋಕಸೇವಾ ಆಯೋಗ{KPSC} ಅಥವಾ ಇತರ ರಾಜ್ಯ/ಕೇಂದ್ರ ಸರ್ಕಾರ/ಖಾಸಗಿ ಸಂಸ್ಥೆಗಳು ನಡೆಸುವ ಪರೀಕ್ಷೆಗಳು) ಶಾಲೆಯ ಆವರಣದಲ್ಲಿ ನಡೆಸಬಾರದು. ಈ ನಿಬಂಧನೆಯನ್ನು ಉಲ್ಲಂಘಿಸಿದ ಜಿಲ್ಲಾ ಉಪನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಡಯಟ್ ಪ್ರಾಂಶುಪಾಲರು, ಶಾಲಾ ಮುಖ್ಯೋಪಾಧ್ಯಾಯರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು. ಇಂತಹ ಪರೀಕ್ಷೆಗಳನ್ನು ನಡೆಸಲು ಅವಕಾಶ ನೀಡಬೇಕಾದ್ದಲ್ಲಿ, ಅದು ಸಾರ್ವಜನಿಕ ರಜೆ ಅಥವಾ ಬೇಸಿಗೆ ರಜೆಯ ಸಮಯದಲ್ಲಿ ಮಾತ್ರ ನಿಯಮಗಳಂತೆ ನೀಡುವುದು.

v) ಜಿಲ್ಲಾ ಉಪನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಡಯಟ್ ಪ್ರಾಂಶುಪಾಲರು, ಶಾಲಾ ಮುಖ್ಯೋಪಾಧ್ಯಾಯರ ಇಲಾಖೆಯ ಯಾವುದೇ ಮಟ್ಟದ ಅಧಿಕಾರಿಗಳು ಖಾಸಗಿ ಸಂಸ್ಥೆಗಳ ಅಥವಾ ಯಾವುದೇ ಜ್ಞಾನ ಪಾಲುದಾರರು ಸಾಫ್ಟ್‌ವೇರ್‌ಗಳಲ್ಲಿ ಡೇಟಾ ಎಂಟ್ರಿ ಮಾಡುವಂತೆ ಶಿಕ್ಷಕರು ಅಥವಾ ಶಾಲಾ ಮುಖ್ಯೋಪಾಧ್ಯಾಯರಿಗೆ ಮೌಖಿಕ ಅಥವಾ ಲಿಖಿತ ಆದೇಶ ನೀಡಬಾರದು. ಇಂತಹ ಆದೇಶ ನೀಡುವ ಯಾವುದೇ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು.

ಈ ಮಾರ್ಗಸೂಚಿಗಳು ಮತ್ತು ನಿರ್ದೇಶನಗಳು ತಕ್ಷಣದಿಂದ ಜಾರಿಗೆ ಬರುತ್ತವೆ.

(ವಿ. ರಶ್ಮಿ ಮಹೇಶ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

ಇವರಿಗೆ:

1. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
2. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
3. ಅಪರ ಆಯುಕ್ತರು, ಧಾರವಾಡ/ಕಲಬುರಗಿ.
4. ಎಲ್ಲಾ ಜಿಲ್ಲೆಯ ಉಪ ನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು.
5. ಎಲ್ಲಾ ಜಿಲ್ಲೆಯ ಡಯಟ್ ಪ್ರಾಂಶುಪಾಲರು.
6. ಎಲ್ಲಾ ಸರ್ಕಾರಿ ಶಾಲೆಗಳ ಮುಖ್ಯೋಪಾಧ್ಯಾಯರು.

# ಮುಖ್ಯ ಚುನಾವಣಾಧಿಕಾರಿ ಕಚೇರಿ, ಕರ್ನಾಟಕ

ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು - 560 001.

---

ಸಂಖ್ಯೆ: ಸಿಇಸುಇ 54 ಚುಮಪ 2021 ದಿನಾಂಕ: 03.08.2023

ಇವರಿಗೆ,

1. ಜಿಲ್ಲಾ ಚುನಾವಣಾಧಿಕಾರಿ ಹಾಗೂ ಆಯುಕ್ತರು, ಬಿಬಿಎಂಪಿ ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳು
3. ಅಪರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಅಪರ ಆಯುಕ್ತರು ಬಿಬಿಎಂಪಿ (ಕೇಂದ್ರ/ಉತ್ತರ/ದಕ್ಷಿಣ)
4. ಅಪರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ, ಬೆಂಗಳೂರು ನಗರ ಜಿಲ್ಲೆ

ಮಾನ್ಯರೆ,

ವಿಷಯ:- ಮತಗಟ್ಟೆ ಅಧಿಕಾರಿಗಳ ಹುದ್ದೆಗೆ ಶಿಕ್ಷಕರನ್ನು ನಿಯೋಜನೆ ಮಾಡುವ ಕುರಿತು

ಉಲ್ಲೇಖ:- 1. ಭಾರತ ಚುನಾವಣಾ ಚುನಾವಣಾ ಆಯೋಗದ ಮತದಾರರ ಪಟ್ಟಿಗಳ ಕೈಪಿಡಿ, ಅಕ್ಟೋಬರ್, 2016
2. ಭಾರತ ಚುನಾವಣಾ ಚುನಾವಣಾ ಆಯೋಗದ ಮತಗಟ್ಟೆ ಅಧಿಕಾರಿಗಳ ಕೈಪಿಡಿ, 2011.
3. ಈ ಕಚೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ 04.03.2022

****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ ಚುನಾವಣಾ ಕಾರ್ಯಗಳಿಗೆ ಭಾರತ ಚುನಾವಣಾ ಚುನಾವಣಾ ಆಯೋಗದ ಮತದಾರರ ಪಟ್ಟಿಗಳ ಕೈಪಿಡಿ, ಅಕ್ಟೋಬರ್, 2016 ರ ಅಧ್ಯಾಯ 5ರ ಪ್ಯಾರಾ 5.2 ರಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳ ನಿಯೋಜನೆಗೆ 13 ವಿವಿಧ ಹುದ್ದೆಗಳ ವಿವರ ನೀಡಲಾಗಿರುತ್ತದೆ. ಅದರಲ್ಲಿ ಶಿಕ್ಷಕರ ಹುದ್ದೆಯೂ ಒಂದಾಗಿರುತ್ತದೆ. ಸರ್ವೋಚ್ಚ ನ್ಯಾಯಾಲಯದ ಅಪೀಲ್ (ಸಿವಿಲ್) 5659/2007 ರಲ್ಲಿ ಚುನಾವಣಾ ಕಾರ್ಯಗಳಿಗೆ ಶಿಕ್ಷಕರನ್ನು ನಿಯೋಜಿಸುವ ಬಗ್ಗೆ ಆದೇಶದಲ್ಲಿ ಈ ಕೆಳಕಂಡಂತೆ ಉಲ್ಲೇಖಿಸಲಾಗಿರುತ್ತದೆ:

**We would, however notice that the Election Commission before us also categorically stated that as far as possible teachers would be put on electoral roll revision works on holidays, non-teaching days and non-teaching hours- whereas non teaching staff be put on duty any time. We therefore, direct that all teaching staff shall be put on the duties of electoral rolls revision and**

Scanned with CamScanner

election works on holidays and non-teaching days. Teachers should not ordinarily be put on duty on teaching days and within teaching hours. Non-teaching staff, however, may be put on such duties on any days, any time, if permissible in law.

ಮೇಲ್ಕಂಡ ಮಾನ್ಯ ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ನಿಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಶಿಕ್ಷಕರನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸುವಾಗ ಈ ಕೆಳಕಂಡಂತೆ ಕ್ರಮವಹಿಸುವುದು.

1. ಯಾವುದೇ ಶಾಲೆಯಲ್ಲಿ ಶೇಕಡಾ ನೂರಕ್ಕೆ ನೂರರಷ್ಟು ಎಲ್ಲಾ ಶಿಕ್ಷಕರನ್ನು ನಿಯೋಜಿಸಬಾರದು.
2. ಶಿಕ್ಷಕರನ್ನು ನಿಯೋಜಿಸುವಾಗ ರಜಾ ದಿನಗಳಲ್ಲಿ ಹಾಗೂ ಬೋಧನಾ ಸಮಯವನ್ನು ಹೊರತುಪಡಿಸಿ ಚುನಾವಣಾ ಕರ್ತವ್ಯಕ್ಕೆ ನಿಯೋಜಿಸುವುದು.
3. Terminal illness ಹೊಂದಿರುವ ಶಿಕ್ಷಕರನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಬಾರದು.
4. ಮುಂದಿನ 6 ತಿಂಗಳ ಅವಧಿಯಲ್ಲಿ ಸೇವೆಯಿಂದ ವಯೋನಿವೃತ್ತಿ ಹೊಂದಲಿರುವ ಶಿಕ್ಷಕರನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಬಾರದು.

ಶಿಕ್ಷಕರನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸುವಾಗ ಮೇಲ್ಕಂಡ ಅಂಶಗಳನ್ನು ಹಾಗೂ ಕಾಲ ಕಾಲಕ್ಕೆ ನೀಡುವ ಭಾರತ ಚುನಾವಣಾ ಆಯೋಗದ ಸುತ್ತೋಲೆ ಹಾಗೂ ಮಾರ್ಗಸೂಚಿಗಳನ್ವಯ ಸೂಕ್ತ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಯೋಗೇಶ್ವರ.ರ. [illegible])
ಜಂಟಿ ಮುಖ್ಯ ಚುನಾವಣಾಧಿಕಾರಿ
ಸಿಆಸುಇ (ಚುನಾವಣೆಗಳು)

ಪ್ರತಿ: (ಮಾಹಿತಿಗಾಗಿ)
ಅಧ್ಯಕ್ಷರು/ ಪ್ರಧಾನ ಕಾರ್ಯದರ್ಶಿ,
ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ (ರಿ), ಬೆಂಗಳೂರು.

Scanned with CamScanner